ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಆನ್‌ಲೈನ್ ಶಿಕ್ಷಣ ಸಮಸ್ಯೆಗಳ ಕುರಿತು

ಶ್ರೀ ಎಸ್. ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ) -

126 (213) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಆನ್‌ಲೈನ್ ಶಿಕ್ಷಣ ಪದ್ಧತಿಯಿಂದಾಗಿ ವಿದ್ಯಾರ್ಥಿಗಳು ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಮಧ್ಯಮ ವರ್ಗದ ಜನ ಹಾಗೂ ಬಡವರಿಗೆ ಆನ್‌ಲೈನ್ ಕ್ಲಾಸ್‌ಗಳು ಹೊರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಆನ್ ಲೈನ್ ಕ್ಲಾಸ್ ನಡೆಸಲು ಶಾಲೆಗಳು ಬೇಕಾಬಿಟ್ಟಿ ಡೊನೇಷನ್ ತೆಗೆದುಕೊಳ್ಳುತ್ತಿರುವುದರಿಂದ ಮಧ್ಯಮ ವರ್ಗದವರ ಜೀವನ ನಿರ್ವಹಣೆ ಕಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಇಂತಹ ಶಾಲೆಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು?